## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಚುನಾವಣಾ ಆಯೋಗ – ಆಯವ್ಯಯದಲ್ಲಿ ಒದಗಿಸಿದ ಸಂಪೂರ್ಣ ಅನುದಾನವನ್ನು ಬಳಸಲು ಅಧಿಕಾರ ನೀಡುವ ಬಗ್ಗೆ – ಆದೇಶ.

******

**ಓದಲಾಗಿದೆ:**

ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರವರ ಪತ್ರ ಕ್ರಮ ಸಂಖ್ಯೆ: ರಾಚುಆ 4 ಲೆಕ್ಕ 2009. ದಿನಾಂಕ: 29–03–2012.

**ಪ್ರಸ್ತಾವನೆ:**

ಚುನಾವಣಾ ಆಯೋಗಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಟಾಸ್ಕ್‌ಫೋರ್ಸ್ ಸಮಿತಿಯ ಶಿಫಾರಸ್ಸುಗಳ ಬಗ್ಗೆ ದಿನಾಂಕ: 27–02–2012 ರಂದು ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಸಚಿವಾಲಯದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಚುನಾವಣಾ ಆಯೋಗಗಳಿಗೆ ಆರ್ಥಿಕ ಅಧಿಕಾರ ನೀಡುವ ಬಗ್ಗೆ ಚರ್ಚೆಯಾಗಿರುವ ಹಿನ್ನೆಲೆಯಲ್ಲಿ ಆಯೋಗಕ್ಕೆ ಪಿ.ಡಿ. ಖಾತೆಯನ್ನು ನೀಡುವುದರ ಜೊತೆಗೆ 2011–12ನೇ ಸಾಲಿನ ಅಂತ್ಯದಲ್ಲಿ ಉಳಿಯುವ ಅನುದಾನವನ್ನು ಪಿ.ಡಿ. ಖಾತೆಯಲ್ಲಿ ಜಮಾ ಮಾಡಿಕೊಳ್ಳಲು ಅನುಮತಿ ನೀಡುವಂತೆಯೂ ತಪ್ಪಿದ್ದಲ್ಲಿ ಏಪ್ರಿಲ್, 2012ರಿಂದಲೇ ಜಾರಿಗೆ ಬರುವಂತೆ ಅನುದಾನ ಬಿಡುಗಡೆ ಮಾಡಲು ಮೇಲೆ ಓದಲಾದ ಪತ್ರದಲ್ಲಿ ರಾಜ್ಯ ಚುನಾವಣಾ ಆಯೋಗವು ಸರ್ಕಾರಕ್ಕೆ ಕೋರಿಕೆ ಮಾಡಿರುತ್ತದೆ.

ರಾಜ್ಯ ಚುನಾವಣಾ ಆಯೋಗದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಕರ್ನಾಟಕ ವಿಧಾನ ಮಂಡಲ ಹಾಗೂ ಸಂಸದೀಯ ಚುನಾವಣೆಗಳಿಗೆ ರಾಜ್ಯ ಮಟ್ಟದಲ್ಲಿ ಯಾವುದೇ ಪಿ.ಡಿ. ಖಾತೆಯನ್ನು ತೆರೆಯದೇ ಚುನಾವಣೆಗಳು ನಡೆದಿರುತ್ತವೆ. ಹಾಗಾಗಿ ಸ್ಥಳೀಯ ಸಂಸ್ಥೆಯ ಚುನಾವಣೆಗಳನ್ನು ನಡೆಸಲು ಸಂಬಂಧಿಸಿದಂತೆ ಹಣಕಾಸು/ನಿಧಿಯನ್ನು ರಾಜ್ಯ ಮಟ್ಟದಲ್ಲಿ ಪಿ.ಡಿ. ಖಾತೆಯನ್ನು ತೆರೆದು ನಡೆಸುವುದು ಸೂಕ್ತವಾಗಲಾರದು ಹಾಗು ಚುನಾವಣೆ ಸಂಬಂಧದಲ್ಲಿ ಉಪಯೋಗಿಸದೆ ಉಳಿದ ಮೊಬಲಗನ್ನು ಆರ್ಥಿಕ ವರ್ಷ್ಯಾಂತದಲ್ಲಿ ಠೇವಣಿ ಇಡುವುದು ಸಹ ಸೂಕ್ತವಾಗಲಾರದೆಂದು ಅಭಿಪ್ರಾಯ ಪಡುತ್ತಾ, ರಾಜ್ಯ ಚುನಾವಣಾ ಆಯೋಗಕ್ಕೆ ಒದಗಿಸುವ ಆಯವ್ಯಯದ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆಗೆ ಯಾವುದೇ ವಿಶೇಷ ಆದೇಶಕ್ಕೆ ಕಾಯದೇ ಆಯೋಗವೇ ಪ್ರತಿ ವರ್ಷವೂ ಏಪ್ರಿಲ್ ತಿಂಗಳಿನಿಂದಲೇ ಬಳಸಲು ಅನುಮತಿಸುವುದು ಸೂಕ್ತವೆಂದು ತೀರ್ಮಾನಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 80 ಜಿಪಸ 2012**
**ಬೆಂಗಳೂರು, ದಿನಾಂಕ: 13–07–2012**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರಸ್ತುತ ರಾಜ್ಯ ಚುನಾವಣಾ ಆಯೋಗಕ್ಕೆ ಆರ್ಥಿಕ ವರ್ಷದಲ್ಲಿ ನಿಗದಿಪಡಿಸಿರುವ ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡುವುದನ್ನು ಕಾಯದೇ ಆಯೋಗವೇ ಪೂರ್ಣ ಅನುದಾನವನ್ನು ಬಳಸಲು ರಾಜ್ಯ ಚುನಾವಣಾ ಆಯೋಗಕ್ಕೆ ಅಧಿಕಾರ ನೀಡಿ ಆದೇಶಿಸಿದೆ.

ಹೆಚ್ಚುವರಿ ಅನುದಾನ ಅಗತ್ಯವಿರುವ ಸಂದರ್ಭದಲ್ಲಿ ಮಾತ್ರ ರಾಜ್ಯ ಚುನಾವಣಾ ಆಯೋಗವು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: 282:ವೆಚ್ಚ-6/2012, ದಿನಾಂಕ: 06-07-2012 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Radha KN

(ಕೆ. ರಾಧಾಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1) ಮಹಾಲೇಖಪಾಲರು, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
3) ಆಯುಕ್ತರು, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
4) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪ ಇಲಾಖೆ.
5) ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಕಟ್ಟಡ (ಹಿಂಭಾಗ), ನಂ. 8, 1ನೇ ಮಹಡಿ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು – 52.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನ ಸೌಧ, ಬೆಂಗಳೂರು.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ – ಮಾಹಿತಿಗಾಗಿ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ನಿರ್ದೇಶಕರು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.